# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 928 (1114)

ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.

ಉತ್ತರಿಸಬೇಕಾದ ದಿನಾಂಕ : 16.12.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಸ್ಥಾಪನೆ ಮಾಡುವ ಯೋಜನೆಯನ್ನು ಯಾವ ವರ್ಷದ ಆಯವ್ಯಯದಲ್ಲಿ ಘೋಷಣೆಯಾಗಿದೆ: ನಿಗದಿಪಡಿಸಿದ ಒಟ್ಟು ಅನುದಾನ ಎಷ್ಟು: | ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಸ್ಥಾಪನೆ ಮಾಡುವ ಯೋಜನೆಯನ್ನು 2021-22ನೇ ವರ್ಷದ ಆಯವ್ಯಯದಲ್ಲಿ ಘೋಷಿಸಲಾಗಿದೆ. ಈ ಯೋಜನೆಯನ್ನು ಖಾಸಗಿ ಹಾಗೂ ಸಾರ್ವಜನಿಕ ಸಹಭಾಗಿತ್ವದಲ್ಲಿ (PPP) ಮಾದರಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು ರೂ. 83.79 ಕೋಟಿಗಳ ಯೋಜನಾ ವರದಿಯನ್ನು ಸಿದ್ಧಪಡಿಸಲಾಗಿದೆ. |
| ಆ | ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಸ್ಥಾಪನೆಗಾಗಿ ಎಷ್ಟು ಜಮೀನನ್ನು ಮಂಜೂರಾತಿ /ಸ್ವಾಧೀನಪಡಿಸಿಕೊಳ್ಳಲಾಗಿದೆ: ಸದರಿ ಜಮೀನು ಪ್ರಸ್ತುತ ಇಲಾಖೆ ಹೆಸರಿಗೆ ವರ್ಗಾವಣೆಯಾಗಿದೆಯೇ: | ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಸಿರಿವಾರ ಗ್ರಾಮದ ಪರಂಪೋಕ ಸರ್ಕಾರಿ ಸ.ನಂ. 124/*/ಪಿ2 ರಲ್ಲಿ 194.33 ಎಕರೆ ಜಮೀನು ಮಂಜೂರಾಗಿರುತ್ತದೆ.<br><br>ಸದರಿ ಜಮೀನು ಇಲಾಖೆಗೆ ವರ್ಗಾವಣೆಯಾಗಿರುವುದಿಲ್ಲ. |
| ಇ | ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಸ್ಥಾಪನೆಯಾದ ರೈತರಿಗೆ ಆಗುವ ಲಾಭಗಳೇನು: (ವಿವರ ಒದಗಿಸುವುದು) | ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಸ್ಥಾಪನೆಯಿಂದ ರೈತರಿಗೆ ಈ ಕೆಳಕಂಡ ಲಾಭಗಳನ್ನು ನಿರೀಕ್ಷಿಸಲಾಗಿದೆ:<br><br>• ಜಿಲ್ಲೆಯಲ್ಲಿ ತೋಟಗಾರಿಕೆ ಪ್ರದೇಶ ವಿಸ್ತರಣೆ.<br><br>• ರೈತರಿಗೆ ಉನ್ನತ ತಂತ್ರಜ್ಞಾನಗಳು ಹಾಗೂ ಹೊಸ ತೋಟಗಾರಿಕೆ ತಳಿಗಳ ಪರಿಚಯ. |

| | | |
|---|---|---|
| | | • ರೈತರಿಗೆ ರಫ್ತು ಮಾರುಕಟ್ಟೆ, ಕೊಯ್ಲೋತ್ತರ ಸಂಸ್ಕರಣಾ ಘಟಕಗಳು, ಶೀಥಲೀಕರಣ ಘಟಕಗಳು, ಸಾವಯವ ತೋಟಗಾರಿಕೆಯ ಬಗ್ಗೆ ಅರಿವು ಮೂಡಿಸುವುದು ಹಾಗೂ ಅಳವಡಿಸಿಕೊಳ್ಳಲು ಪ್ರೇರಣೆ.<br>• ಉನ್ನತ ಮಟ್ಟದ ಪ್ರಯೋಗಾಲಯಗಳು, ಉತ್ತಮ ಹಾಗೂ ಉತ್ಕೃಷ್ಟ ಗುಣಮಟ್ಟದ ಸ್ವದೇಶಿ ಸಸಿಗಳನ್ನು ಒದಗಿಸುವ ನರ್ಸರಿಗಳನ್ನು ಸ್ಥಾಪಿಸಿ ಸ್ಥಳೀಯ ಯುವಕರಿಗೆ ಸ್ವಯಂ ಉದ್ಯೋಗವಕಾಶ.<br>• ಇಸ್ರೇಲಿ ತಂತ್ರಜ್ಞಾನ ಪದ್ಧತಿಗಳು ಹಾಗೂ ಸಮಗ್ರ/ ಸುಸ್ಥಿರ ಕೃಷಿ ಪದ್ಧತಿಗಳ ಅಳವಡಿಕೆ ಮೂಲಕ ರಾಜ್ಯದ ಮತ್ತು ಅದರಲ್ಲೂ ಉತ್ತರ ಕರ್ನಾಟಕ ಭಾಗದ ರೈತರ ಆರ್ಥಿಕ/ಸಾಮಾಜಿಕ ಸ್ಥಿತಿಯಲ್ಲಿ ಸುಧಾರಣೆ ಮತ್ತು ಉದ್ಯೋಗ ಸೃಷ್ಟಿ. |
| **ಈ** | ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಸ್ಥಾಪನೆ ಯಾವ ಹಂತದಲ್ಲಿದೆ? (ವಿವರ ಒದಗಿಸುವುದು) | 1) ಉದ್ದೇಶಿತ ಜಮೀನಿನಲ್ಲಿ ಬೆಳೆದ ಕುರುಚಲು ಹಾಗೂ ಕಾಡು ಗಿಡಗಳನ್ನು ತೆರವುಗೊಳಿಸುವ ಕಾಮಗಾರಿ ಪ್ರಗತಿಯಲ್ಲಿದೆ.<br>2) ರಾಜ್ಯ ಹೆದ್ದಾರಿಯಿಂದ ತಂತ್ರಜ್ಞಾನ ಪಾರ್ಕ್ ಜಮೀನಿಗೆ ಸಂಪರ್ಕ ರಸ್ತೆ ಹಾಗೂ ಪ್ರದೇಶದ ಸುತ್ತಲೂ ಸಂರಕ್ಷಣಾ ಗೋಡೆಯನ್ನು /ಬೇಲಿಯನ್ನು ನಿರ್ಮಿಸುವ ಕುರಿತು PWD ಇಲಾಖೆಯಿಂದ ಅಂದಾಜು ಪಟ್ಟಿ ಸಿದ್ಧಪಡಿಸಲಾಗಿದೆ.<br>3) ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ರೂ. 09.99 ಕೋಟಿ ಬಿಡುಗಡೆ ಮಾಡುವ ಪ್ರಸ್ತಾವನೆಯು ಮಂಡಳಿಯ ಪರಿಶೀಲನೆಯಲ್ಲಿದೆ. |

**ಸಂಖ್ಯೆ: HORTI 563 HGM 2025**

P.S. ~Kori

**(ಎಸ್. ಎಸ್. ಮಲ್ಲಿಕಾರ್ಜುನ್)**

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**